# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀಮತಿ ಜೆ.ಬಿ.ನೂರ್‌ಜಹಾನ್, ಸಹಾಯಕ ಕೃಷಿ ನಿರ್ದೇಶಕರು, ಭಟ್ಕಳ, ಇವರು ವಿದೇಶ ವ್ಯಾಸಂಗಕ್ಕೆ ತೆರಳಿ ಕರ್ತವ್ಯಕ್ಕೆ ಹಾಜರಾಗದಿರುವ ಬಗ್ಗೆ ಶಿಸ್ತುಕ್ರಮ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ:ಕೃತೋಇ 75 ಕೃಪಸೇ 2005, ದಿನಾಂಕ:28-04-2005.
2. ಕೃಷಿ ಆಯುಕ್ತರ ಕಛೇರಿಯ ಪತ್ರ ಸಂಖ್ಯೆ:ಸಿಬ್ಬಂದಿ-1/ವಿಚಾರಣೆ-1/19/2012-13 ದಿನಾಂಕ: 26-04-2013.
3. ಸರ್ಕಾರದ ಕಾರಣ ಕೇಳುವ ಪತ್ರ ಸಂಖ್ಯೆ: ಕೃಇ 72ಕೃಪವಿ 2012, ದಿನಾಂಕ:19-07-2013.
4. ಶ್ರೀಮತಿ ಜೆ.ಬಿ.ನೂರ್‌ಜಹಾನ್, ಸಹಾಯಕ ಕೃಷಿ ನಿರ್ದೇಶಕರು ಇವರ ಲಿಖಿತ ಹೇಳಿಕೆ ದಿನಾಂಕ:23-09-2013.

*********

ಪ್ರಸ್ತಾವನೆ:

ಶ್ರೀಮತಿ ಜೆ.ಬಿ. ನೂರ್‌ಜಹಾನ್, ಸಹಾಯಕ ಕೃಷಿ ನಿರ್ದೇಶಕರು, ಭಟ್ಕಳ ಇವರಿಗೆ ಎರಾಸ್ಮಸ್ ವಿಶ್ವವಿದ್ಯಾಲಯ, ನೆದರ್‌ಲ್ಯಾಂಡ್‌ನಲ್ಲಿ ಸ್ನಾತಕೋತ್ತರ ವ್ಯಾಸಂಗಕ್ಕೆ ತೆರಳಲು ಸ್ನಾತಕೋತ್ತರ ವ್ಯಾಸಂಗಕ್ಕೆ ತೆರಳಿದ ದಿನಾಂಕದಿಂದ 4 ವರ್ಷಗಳ ಅವಧಿಗೆ ಸ್ನಾತಕೋತ್ತರ ವ್ಯಾಸಂಗ ಮುಗಿಸಿ ಪುನಃ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳುವ ದಿನಾಂಕದವರೆಗಿನ ಅವಧಿಯನ್ನು ಲೆಕ್ಕಕ್ಕಿಲ್ಲದ ಅವಧಿ (Dies-Non) ಎಂದು ಪರಿಗಣಿಸುವ ಷರತ್ತಿಗೆ ಒಳಪಟ್ಟು ಮೇಲೆ ಕ್ರ. ಸಂ. (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಅನುಮತಿ ನೀಡಲಾಗಿದೆ. ಶ್ರೀಮತಿ ಜೆ.ಬಿ. ನೂರ್‌ಜಹಾನ್, ಸಹಾಯಕ ಕೃಷಿ ನಿರ್ದೇಶಕರು, ಭಟ್ಕಳ ಇವರು ಸ್ನಾತಕೋತ್ತರ ವ್ಯಾಸಂಗಕ್ಕಾಗಿ ದಿನಾಂಕ: 01-06-2005 ರಿಂದ 01-06-2009 ರವರೆಗೆ 4 ವರ್ಷಗಳ ವೇತನ ರಹಿತ ರಜೆ ಪಡೆದು ಇಂದಿನವರೆಗೂ ಮರಳಿ ಕರ್ತವ್ಯಕ್ಕೆ ಹಾಜರಾಗದಿರುವುದರಿಂದ ಇವರ ವಿರುದ್ಧ ಶಿಸ್ತುಕ್ರಮ ಕೈಗೊಳ್ಳಲು ಕರ್ನಾಟಕ ನಾಗರಿಕ ಸೇವಾ(ಸಿ.ಸಿ.ಎ.) ನಿಯಮಾವಳಿ 1957ರ ನಿಯಮ 11ರಡಿ ದೋಷಾರೋಪಣಾ ಪಟ್ಟಿಯನ್ನು ಮೇಲೆ ಕ್ರಮ ಸಂಖ್ಯೆ(2)ರಲ್ಲಿ ಓದಲಾದ ಪತ್ರದಲ್ಲಿ ಕೃಷಿ ಆಯುಕ್ತರು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಶ್ರೀಮತಿ ಜೆ.ಬಿ. ನೂರ್‌ಜಹಾನ್, ಸಹಾಯಕ ಕೃಷಿ ನಿರ್ದೇಶಕರು, ಭಟ್ಕಳ ಇವರಿಗೆ ಮೇಲೆ ಕ್ರಮಾಂಕ (3)ರಲ್ಲಿ ಓದಲಾದ ಪತ್ರದಲ್ಲಿ ಕಾರಣ ಕೇಳುವ ನೋಟೀಸ್‌ನ್ನು ದೋಷಾರೋಪಣೆ ಪಟ್ಟಿಯೊಡನೆ ಜಾರಿ ಮಾಡಲಾಗಿತ್ತು. ಸದರಿ ಅಧಿಕಾರಿಯವರು ಕ್ರಮಾಂಕ(4) ರಲ್ಲಿ ಓದಲಾದ ಪತ್ರದಲ್ಲಿ ಸರ್ಕಾರಕ್ಕೆ ತಮ್ಮ ಲಿಖಿತ ಹೇಳಿಕೆಯನ್ನು ಸಲ್ಲಿಸಿ, ತಮ್ಮ ಮೇಲಿನ ಆರೋಪಗಳನ್ನು ಅಲ್ಲಗಳೆದು ತಮ್ಮನ್ನು ದೋಷಮುಕ್ತರನ್ನಾಗಿ ಮಾಡಬೇಕೆಂದು ಕೋರಿರುತ್ತಾರೆ. ಸದರಿ ಅಧಿಕಾರಿಯವರು ಸಲ್ಲಿಸಿರುವ ಲಿಖಿತ ಹೇಳಿಕೆಗಳನ್ನು ಪರಿಶೀಲಿಸಿ, ಅವರ ಹೇಳಿಕೆಯಲ್ಲಿ ಪರಿಶೀಲಿಸುವಂತಹ ಅಂಶಗಳು ಇಲ್ಲವಾದ್ದರಿಂದ ಪ್ರಕರಣದ ಸತ್ಯಾಸತ್ಯತೆಯನ್ನು ತಿಳಿಯಲು ಇಲಾಖಾ ವಿಚಾರಣೆಯನ್ನು ನಡೆಸಲು ತೀರ್ಮಾನಿಸಿ, ಶ್ರೀ ಕೆ.ರಾಧಾಕೃಷ್ಣ ಹೊಳ್ಳ, ನಿವೃತ್ತ ಜಿಲ್ಲಾ